ಉತ್ತರವನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 230 ಪ್ರಶ್ನೆಗಳ ಪೈಕಿ 209 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಗಿದೆ.

(ಅನುಬಂಧ–1) (ಭಾಗ–II) ಮತ್ತು (ಭಾಗ– III)

8. ವರದಿಯನ್ನೊಪ್ಪಿಸುವುದು

ಅಧ್ಯಕ್ಷರು (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ ಇವರ ಪರವಾಗಿ): 2013–14ನೇ ಸಾಲಿನ ಸಮಿತಿಯ ಮೂರನೇ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ಮಂಡಿಸಲಾಯಿತು.

9. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

1. ವಿಷಯ: ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನಲ್ಲಿ ಗೊಬ್ಬರಗುಂಡಿ ಮತ್ತು ಅಮರಗೋಳ, ಇಲ್ಲಿ ಏತ ನೀರಾವರಿಯನ್ನು ಪ್ರಾರಂಭಿಸುವ ಬಗ್ಗೆ

ಶ್ರೀ ಎನ್.ಹೆಚ್. ಕೋನರೆಡ್ಡಿ (ನವಲಗುಂದ): ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನಲ್ಲಿ ಗೊಬ್ಬರಗುಂಡಿ ಮತ್ತು ಅಮರಗೋಳ ಲಿಫ್ಟ್ ಇರಿಗೇಷನ್ ಕಾಮಗಾರಿಗೆ ಹಿಂದೆ ಪೂಜೆ ಮಾಡಿದ್ದಾರೆ. ಆದ್ದರಿಂದ, ಸದರಿ ಯೋಜನೆಯನ್ನು ಜಾರಿಗೊಳಿಸಬೇಕೆಂದು ಮಾನ್ಯ ನೀರಾವರಿ ಸಚಿವರಲ್ಲಿ ಒತ್ತಾಯ ಮಾಡುತ್ತೇನೆ.

ಶ್ರೀ ಎಂ.ಬಿ. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ ಸಚಿವರು): ಮಾನ್ಯ ಅಧ್ಯಕ್ಷರೆ, ಈ ವಿಷಯಕ್ಕೆ ಸಂಬಂಧಪಟ್ಟಂಥ ಫೈಲ್ ತರುತ್ತಿದ್ದಾರೆ. ಆನಂತರ ಇದರ ಬಗ್ಗೆ ಉತ್ತರ ಕೊಡುತ್ತೇನೆ.

ಅಧ್ಯಕ್ಷರು: ಆಯಿತು. ಆಮೇಲೆ ಉತ್ತರ ಕೊಡಿ.